## ದಿನಾಂಕ:03-12-2022ರಂದು ಬೆಳಗ್ಗೆ 12:30 ಗಂಟೆಗೆ ವಾರ್ಡ್-88 ರ ಕೋಡಿಹಳ್ಳಿ ಸರ್ಕಾರಿ ಶಾಲೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಾರ್ಡ್ ಸಂಖ್ಯೆ-88 ಜೀವನ್‌ಭೀಮಾನಗರದ ಕೋಡಿಹಳ್ಳಿ ಸರ್ಕಾರಿ ಶಾಲೆಯಲ್ಲಿ ದಿನಾಂಕ: 03-12-2022 ರಂದು ಬೆಳಿಗ್ಗೆ 12.30 ಗಂಟೆಗೆ ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ನಿಯೋಜಿಸಿರುವ ವಾರ್ಡ್‌ನ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ, ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಈ ಕೆಳಕಂಡಂತೆ ಸದಸ್ಯರು ಸಭೆಯಲ್ಲಿ ಭಾಗವಹಿಸಿರುತ್ತಾರೆ.

**ಸಭೆಗೆ ಹಾಜರಿದ್ದ ಸದಸ್ಯರು ಹಾಗೂ ಅಧಿಕಾರಿಗಳು**

1. ಶ್ರೀಮತಿ. ಸಾವಿತ್ರಿ - ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು, ವಾರ್ಡ್-88.
2. ಶ್ರೀಮತಿ. ಶಿಲ್ಪಶ್ರೀ - ಸಹಾಯಕ ಅಭಿಯಂತರರು ಹಾಗೂ ಸದಸ್ಯ ಕಾರ್ಯದರ್ಶಿ.
3. ಶ್ರೀ. ಚಂದ್ರ - ಸದಸ್ಯರು
4. ಶ್ರೀ. ಪಾಲ್ ಅಮಲ್‌ರಾಜ್- ಸದಸ್ಯರು
5. ಶ್ರೀಮತಿ. ಪೂರ್ಣಿಮ ಶೆಟ್ಟಿ- ಸದಸ್ಯರು
6. ಶ್ರೀಮತಿ. ದೀಪ ನಾಯರ್- ಸದಸ್ಯರು
7. ಶ್ರೀಮತಿ. ಚಿತ್ರ - ಸದಸ್ಯರು
8. ಶ್ರೀ. ಮೈಕಲ್ ಫ್ಲೇಕ್ಸ್ - ಸಾರ್ವಜನಿಕರು
9. ಶ್ರೀ. ಕೃಷ್ಣ - ಸಾರ್ವಜನಿಕರು
10. ಶ್ರೀ. ಮಂಜುನಾಥ - ಸಾರ್ವಜನಿಕರು

ಪ್ರಥಮವಾಗಿ ವಾರ್ಡ್ ಕಾರ್ಯದರ್ಶಿಗಳು ಹಾಗೂ ಸಂಚಾಲಕರು ಆದ ಶ್ರೀಮತಿ. ಶಿಲ್ಪಶ್ರೀ ರವರು ಸಭೆಗೆ ಆಗಮಸಿದ್ದ ಎಲ್ಲಾ ಅಧಿಕಾರಿಗಳು, ಸದಸ್ಯರು ಮತ್ತು ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸಿದರು. ಹಿಂದಿನ ಸಭೆಯ ನಡವಳಿಗಳನ್ನು ಓದಿ ತಿಳಿಸಿದರು. ಹಾಗೂ ಇಂದಿನ ಸಭೆಯ ಅಜೆಂಡಾ ಹಾಗೂ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ ಸಭೆಗೆ ಮಾಹಿತಿ ನೀಡುವಂತೆ ಕೋರಿದರು.

- 13ನೇ 'ಬಿ' ಮುಖ್ಯ ರಸ್ತೆಯಿಂದ 18ನೇ ಮುಖ್ಯ ರಸ್ತೆಯವರೆಗೂ ಡಾಂಬರೀಕರಣ ಮಾಡಿಸಿಕೊಡಬೇಕೆಂದು ಸಬೆಯಲ್ಲಿ ಹಾಜರಿದ್ದ ಶ್ರೀಮತಿ. ದೀಪ ನಾಯರ್ ರವರು ತಿಳಿಸಿದರು. ಇದಕ್ಕೆ ಸಂಬಂಧಪಟ್ಟ ಸಹಾಯಕ ಅಭಿಯಂತರರು ರವರು ಮುಂದಿನ ದಿನಗಳಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿರುತ್ತಾರೆ.

- 2018ನೇ ಸಾಲಿನಿಂದ 2022ರವರೆಗಿನ Budget ಗೆ ಸಂಬಂಧಿಸಿದ ವಿವರಗಳನ್ನು ನೀಡಬೇಕೆಂದು ಸಭೆಯಲ್ಲಿ ಹಾಜರಿದ್ದ ಶ್ರೀ. ಕೃಷ್ಣ ರವರು ಸಭೆಯಲ್ಲಿ ಕೋರಿರುತ್ತಾರೆ. ಇದಕ್ಕೆ ಸಂಬಂಧಪಟ್ಟ ಸಹಾಯಕ ಅಭಿಯಂತರರು ರವರು ಮುಂದಿನ ವಾರ್ಡ್ ಕಮಿಟಿ ಸಭೆಯಲ್ಲಿ ನೀಡುವುದಾಗಿ ತಿಳಿಸಿರುದರು.

- ಎಸ್.ಸಿ.ಟಿ.ಎಸ್.ಪಿ ಗೆ ಸಂಬಂಧಿಸಿದ ವಿವರಗಳನ್ನು ನೀಡಬೇಕೆಂದು ಸಭೆಯಲ್ಲಿ ಹಾಜರಿದ್ದ ಶ್ರೀ. ಕೃಷ್ಣ ರವರು ಸಭೆಯಲ್ಲಿ ಕೋರಿರುತ್ತಾರೆ. ಇದಕ್ಕೆ ಸಂಬಂಧಪಟ್ಟ ಸಹಾಯಕ ಅಭಿಯಂತರರು ರವರು ಮುಂದಿನ ವಾರ್ಡ್ ಕಮಿಟಿಯಲ್ಲಿ ನೀಡುವುದಾಗಿ ತಿಳಿಸಿರುದರು.

- ಅನಂದಪುರ ಸ್ಲಂನಲ್ಲಿ ಕಸ ವಿಲೇವಾರಿ, ಎಲ್.ಇ.ಡಿ ಬಲ್ಬ್ಸ್, ಹಾಗೂ ರಸ್ತೆಗಳನ್ನು ಸರಿಯಾಗಿ ನಿರ್ವಹಣೆಯನ್ನು ಮಾಡುತ್ತಿಲ್ಲವೆಂದು ಸಭೆಯಲ್ಲಿ ದೂರುನ್ನು ಸಲ್ಲಿಸಿರುತ್ತಾರೆ. ಇದಕ್ಕೆ ನೋಡಲ್ ಅಧಿಕಾರಿಯವರು ಸಂಬಂಧಪಟ್ಟವರಿಗೆ ಸದರಿ ದೂರಿನ ಬಗ್ಗೆ ಸ್ಪಷ್ಟ ಅಭಿಪ್ರಾಯವನ್ನು ನೀಡಬೇಕೆಂದು ಸೂಚಿಸಿರುತ್ತಾರೆ.

- ಘನ ತ್ಯಾಜ್ಯ ನಿರ್ವಹಣೆಯ ವಾಹನಗಳ ಬಗ್ಗೆ ವಿವರಗಳನ್ನು ನೀಡಬೇಕೆಂದು ಸಭೆಯಲ್ಲಿ ಹಾಜರಿದ್ದ ಶ್ರೀಮತಿ. ಪೂರ್ಣಿಮ ಶೆಟ್ಟಿ, ಸದಸ್ಯರು ಕೋರಿರುತ್ತಾರೆ. ಇದಕ್ಕೆ ಸಂಬಂಧಪಟ್ಟ ಸಹಾಯಕ ಅಭಿಯಂತರರು ರವರು ಮುಂದಿನ ವಾರ್ಡ್ ಕಮಿಟಿಯಲ್ಲಿ ನೀಡುವುದಾಗಿ ತಿಳಿಸಿರುದರು.

- 12ನೇ ಮುಖ್ಯ ರಸ್ತೆಯಿಂದ 14ನೇ ಮುಖ್ಯ ರಸ್ತೆಯವರೆಗೆ ಸಾನಿಟರಿ ಪೈಪ್ ಲೈನ್ ಬದಲಾಯಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ಶ್ರೀಮತಿ.ಚಿತ್ರರವರು ತಿಳಿಸಿದರು. ಇದಕ್ಕೆ ಸಂಬಂಧಪಟ್ಟ ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರು ರವರು ಮುಂದಿನ ದಿನಗಳಲ್ಲಿ ಸೂಕ್ತ ರೀತಿಯ ಲೈನ್ ಬದಲಾವಣೆಯನ್ನು ಕೈಗೊಳ್ಳಲಾಗುವುದೆಂದು ತಿಳಿಸಿದರು.

- 8ನೇ ಅಡ್ಡ ರಸ್ತೆಯಿಂದ 80 ಅಡಿ ರಸ್ತೆಯವರೆಗೆ ಸ್ಯಾನಿಟರಿ ಲೈನ್ ಬದಲಾಯಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ಶ್ರೀ. ಚಂದ್ರುರವರು ತಿಳಿಸಿದರು. ಇದಕ್ಕೆ ಸಂಬಂಧಪಟ್ಟ ಬಿ.ಡ.ಬ್ಲ್ಯೂಎಸ್.ಎಸ್.ಬಿ ಅಭಿಯಂತರರು ರವರು ಮುಂದಿನ ದಿನಗಳಲ್ಲಿ ಕಾಮಗಾರಿಯನ್ನು ಕೈಗೊಳ್ಳಲಾಗುವುದೆಂದು ತಿಳಿಸಿದರು.

- ಎಸ್.ಎಲ್.ವಿ ಪಾರ್ಕ್ ಅಪಾರ್ಟ್‌ಮೆಂಟ್‌ನ ಮೆನ್‌ಹೋಲ್ ಬದಲಾಯಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ಶ್ರೀ.ಮಂಜುನಾಥರವರು ತಿಳಿಸಿದರು. ಇದಕ್ಕೆ ಸಂಬಂಧಪಟ್ಟ ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರು ರವರು ಮುಂದಿನ ದಿನಗಳಲ್ಲಿ ಮೆನ್‌ಹೋಲ್ ಲೀಡ್ ಬದಲಾವಣೆ ಮಾಡಿಕೊಡುವುದಾಗಿ ತಿಳಿಸಿದರು.

- ಪಾದಚಾರಿ ಮಾರ್ಗದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ಅಂಗಡಿ ಮುಗ್ಗಟ್ಟುಗಳನ್ನು ತೆರವುಗೊಳಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ಶ್ರೀಮತಿ ಚಿತ್ರರವರು ಕೋರಿರುತ್ತಾರೆ. ಇದಕ್ಕೆ ಸಂಬಂಧಪಟ್ಟ ಸಹಾಯಕ ಅಭಿಯಂತರರು, ಸಂಚಾರಿ ಪೋಲೀಸ್ ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು ಒಟ್ಟಿಗೆ ಕೂಡಿ ಅಂಗಡಿ ಮುಗ್ಗಟ್ಟುಗಳನ್ನು ತೆರವುಗೊಳಿಸಲು ಸೂಚಿಸಿರುತ್ತಾರೆ.

Shilpa
ಕಾರ್ಯದರ್ಶಿಗಳು
**ವಾರ್ಡ್ ಸಮಿತಿ–88**

5/12/22
ಅಧ್ಯಕ್ಷರು
**ವಾರ್ಡ್ ಸಮಿತಿ, ವಾರ್ಡ್ 88**
**ಹಾಗೂ ನೋಡಲ್ ಅಧಿಕಾರಿಗಳು,**
**ವಾರ್ಡ್ 88**